ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಎಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027.India
Tel : 080-22221321 / 25
Website : www.ksrtc.in

ಸಂಖ್ಯೆ: ಕರಾಸಾ/ಕೇಕ/ಆಡಳಿತ/ಎ1-04/ 73 /2021-22 ದಿನಾಂಕ: 23/04/2021

## : ಆ ದೇ ಶ :

ವಿಷಯ: ಕೋವಿಡ್-19 ಎರಡನೆಯ ಅಲೆಯ ವ್ಯಾಪಕವಾಗಿ ಹರಡುತ್ತಿರುವ ಕುರಿತು ಮುಂಜಾಗ್ರತಾ ಕ್ರಮವಾಗಿ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳ ಕುರಿತು.

ಉಲ್ಲೇಖ:1. No. RD 158 TNR 2020 Dated: 20.04.2021
2. ಸಂಖ್ಯೆ:ಸಿಆಸುಇ 87 ಡಿಇವಿ 2021 ದಿನಾಂಕ:20.04.2021
3. ಸಂಖ್ಯೆ:ಆಇ 135 ಸಿಡಿಎನ್ 2021 ದಿನಾಂಕ:21.04.2021
4. ಸೂಕ್ತಾಧಿಕಾರಿಗಳ ಆದೇಶ ದಿನಾಂಕ: 23.04.2021

******

ಮೇಲಿನ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಪಟ್ಟಂತೆ, ಕರ್ನಾಟಕ ರಾಜ್ಯದಲ್ಲಿ ವ್ಯಾಪಕವಾಗಿ ಕೋವಿಡ್-19 ಎರಡನೆಯ ಅಲೆಯು ಹರಡುತ್ತಿರುವ ಕಾರಣದಿಂದಾಗಿ ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಉಲ್ಲೇಖ: 1&2 ರಲ್ಲಿ ಸರ್ಕಾರವು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸದರಿ ಸರ್ಕಾರಿ ಅಧಿಸೂಚನೆಗಳಂತೆ ಕ.ರಾ.ರ.ಸಾ.ನಿಗಮದಲ್ಲಿ ಈ ಕೆಳಕಂಡ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

1. ಕೇಂದ್ರ ಕಚೇರಿ, ವಿಭಾಗೀಯ ಕಚೇರಿ, ಘಟಕಗಳು, ಕಾರ್ಯಾಗಾರಗಳು ಹಾಗೂ ತರಬೇತಿ ಕೇಂದ್ರಗಳನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಮುಖಗವಸನ್ನು **(MASK)** ಧರಿಸುವುದು, ಸ್ಯಾನಿಟೈಸರ್ **(SANITIZER)** ಬಳಸುವುದು ಹಾಗೂ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ.

2. ಸಾರ್ವಜನಿಕ ಸಂದರ್ಶಕರು ಹಾಗೂ ಇತರೆ ಸಿಬ್ಬಂದಿಗಳು ಕಚೇರಿಗಳಿಗೆ ಭೇಟಿ ನೀಡುವುದನ್ನು ಕಡ್ಡಾಯವಾಗಿ ನಿಷೇಧಿಸುವುದು ಹಾಗೂ ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಮುಖ್ಯ ದ್ವಾರಗಳಲ್ಲಿ ಭದ್ರತಾ ಸಿಬ್ಬಂದಿಯು ಪರಿಶೀಲಿಸಿ ಅಗತ್ಯವಿದ್ದಲ್ಲಿ ಮಾತ್ರ ಭೇಟಿಗೆ ಅವಕಾಶ ನೀಡುವುದು.

3. ಸಾಮಾಜಿಕ ಅಂತರ ಕಾಪಾಡುವ ದೃಷ್ಟಿಯಿಂದ ಪ್ರಾದೇಶಿಕ ಕಾರ್ಯಾಗಾರಗಳು ಹಾಗೂ ಕ.ರಾ.ಸಾ.ಮುದ್ರಣಾಲಯದಲ್ಲಿ ನೌಕರರು ಗುಂಪಾಗಿ ಕಾರ್ಯ ನಿರ್ವಹಿಸುವ ಸ್ಥಳ/ವ್ಯವಸ್ಥೆಯಲ್ಲಿ ಸೂಕ್ತ ಬದಲಾವಣೆ ಮಾಡುವುದು.

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು(ಸಿಬ್ಬಂದಿ)

..02

Scanned with CamScanner

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಕ.ರಾ.ರ.ಸಾ.ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರ ಹಿರಿಯ ಆಪ್ತ ಕಾರ್ಯದರ್ಶಿ, ಕ.ರಾ.ರ.ಸಾ.ನಿಗಮ ರವರಿಗೆ
3. ಮಾನ್ಯ ನಿರ್ದೇಶಕರು(ಸಿ:ಪ)/(ಭ:ಜಾ), ಕ.ರಾ.ರ.ಸಾ.ನಿಗಮ, ರವರ ಹಿರಿಯ ಆಪ್ತ ಕಾರ್ಯದರ್ಶಿ ರವರಿಗೆ.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ಹಿರಿಯ/ವಿಭಾಗೀಯ ಮುಖ್ಯಸ್ಥರುಗಳು /ಕಾರ್ಯವ್ಯವಸ್ಥಾಪಕರು / ಪ್ರಾಂಶುಪಾಲರು / ಮುದ್ರಣ & ಲೇಖನ ಸಾಮಗ್ರಿ ನಿಯಂತ್ರಣಾಧಿಕಾರಿ ಕ.ರಾ.ರ.ಸಾ.ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆ ರವರಿಗೆ.
6. ಮುಖ್ಯ ಭದ್ರತಾ & ಜಾಗೃತಾಧಿಕಾರಿ, ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ, ಸದರಿ ಆದೇಶವನ್ನು ಕೇಂದ್ರ ಕಚೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
7. ಮುಖ್ಯ ಗಣಕ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ, ಕಚೇರಿ ಆದೇಶವನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
8. ಪ್ರಧಾನ ಕಛೇರಿ ಪತ್ರ ಕಡತ.

Scanned with CamScanner